ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 2061 (2381+2364)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ಜೆ.ಓ.ಸಿ ಯ ವಿಲೀನ ವಂಚಿತ 530 ಬೋಧಕ ಮತ್ತು ಬೋಧಕೇತರರನ್ನು ವಿಲೀನಗೊಳಿಸುವ ಕುರಿತು

(ಅ) ಜೆ.ಓ.ಸಿ ಯಲ್ಲಿ ಕಾರ್ಯನಿರ್ವಹಿಸುತ್ತಿದ್ದ 3746 ಸಿಬ್ಬಂದಿಗಳಲ್ಲಿ 3216 ಸಿಬ್ಬಂದಿಗಳು ವಿಲೀನಾತಿ ಹೊಂದಿದ್ದು ಉಳಿದ 530 ಜನರು ವಿಲೀನಾತಿ ಪ್ರಕ್ರಿಯೆಯಿಂದ ಹೊರಗುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಪ್ರಕ್ರಿಯೆಯಿಂದ ಹೊರಗುಳಿದ 530 ಜನ ಬೋಧಕ ಮತ್ತು ಬೋಧಕೇತರರನ್ನು ಜೆ.ಓ.ಸಿ ವಿಲೀನ ವಿಧೇಯಕವನ್ನು ತಿದ್ದುಪಡಿ ಮಾಡಿ ವಿಲೀನಗೊಳಿಸುವ ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಸಿಬ್ಬಂದಿಗಳನ್ನು ವಿಲೀನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಖಾಯಂಗೊಳಿಸುವ/ವಿಲೀನಗೊಳಿಸುವ ಪ್ರಕ್ರಿಯೆಯಿಂದ ಹೊರಗುಳಿದ ಸದರಿ 530 ಜನ ಸಿಬ್ಬಂದಿಯು ತೀವ್ರ ಸಂಕಷ್ಟದಲ್ಲಿರುವುದರಿಂದ ಅವರುಗಳನ್ನು ವಿಲೀನಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?